# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 202 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಹೆಚ್.ಎಂ. ರಮೇಶ್ ಗೌಡ(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 22.09.2020 |
| ಉತ್ತರಿಸುವ ಸಚಿವರು | : | ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದ ಗ್ರಾಮೀಣ ಪ್ರದೇಶದ ನ್ಯಾಯಬೆಲೆ ಅಂಗಡಿಗಳ ಅಸಮರ್ಪಕ ಕಾರ್ಯಾಚರಣೆಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; | ಗ್ರಾಮೀಣ ಪ್ರದೇಶವು ಸೇರಿದಂತೆ ರಾಜ್ಯಾದ್ಯಂತ ನ್ಯಾಯಬೆಲೆ ಅಂಗಡಿಗಳ ಮುಖಾಂತರ ಪಡಿತರ ವಿತರಣೆಯನ್ನು ಸಮರ್ಪಕವಾಗಿ ಮಾಡಲಾಗುತ್ತಿದೆ. |
| ಆ | ಸದರಿ ಬಿ.ಪಿ.ಎಲ್ ಕಾರ್ಡುದಾರರು ಪಡಿತರಗಳನ್ನು ಪಡೆಯಬೇಕಾದ್ದಲ್ಲಿ ಕನಿಷ್ಠ 10-15 ಕಿಲೋಮೀಟರ್ ತೆರಳಬೇಕಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿನ ಬಿ.ಪಿ.ಎಲ್ ಪಡಿತರ ಫಲಾನುಭವಿಗಳಿಗೆ ಅನುಕೂಲವಾಗುವಂತೆ ಸಾಕಷ್ಟು ಸಂಖ್ಯೆಯ ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸುತ್ತಿವೆ. 10-15 ಕಿಲೋಮೀಟರ್ ದೂರದಲ್ಲಿರುವ ನ್ಯಾಯಬೆಲೆ ಅಂಗಡಿಗಳಿಂದ ಪಡಿತರ ಫಲಾನುಭವಿಗಳು ಪಡಿತರವನ್ನು ಪಡೆಯುತ್ತಿರುವ ಬಗ್ಗೆ ಯಾವುದೇ ದೂರುಗಳು ಇರುವುದಿಲ್ಲ. |
| ಇ | ಬಂದಿದ್ದಲ್ಲಿ, ಸಮೀಪದಲ್ಲಿ ಪಡಿತರ ಅಂಗಡಿಗಳನ್ನು ತೆರೆಯಲು ಯಾವ ಕ್ರಮ ಕೈಗೊಂಡಿದೆ; | ದೂರದ ಪ್ರದೇಶಗಳು ಹಾಗೂ ಗುಡ್ಡಗಾಡು ಪ್ರದೇಶಗಳಲ್ಲಿ ವಿಶೇಷ ಪ್ರಕರಣವೆಂದು ಪರಿಗಣಿಸಿ, ಪ್ರತಿ ನ್ಯಾಯಬೆಲೆ ಅಂಗಡಿಗೆ ಕನಿಷ್ಟ 500 ಪಡಿತರ ಚೀಟಿಗಳಿರಬೇಕೆಂಬ ಮಾನದಂಡವನ್ನು ಸಡಿಲಿಸಿ 100 ಪಡಿತರ ಚೀಟಿಗಳಿರುವುದನ್ನು ಪರಿಗಣಿಸಿ ಹೊಸ ನ್ಯಾಯಬೆಲೆ ಅಂಗಡಿಯನ್ನು ತೆರೆಯಲು ಸಾರ್ವಜನಿಕ ವಿತರಣಾ ಪದ್ಧತಿ ನಿಯಂತ್ರಣ ಆದೇಶ 2016 ರ ಕಲಂ -6 ರಂತೆ ಆಯಾ ಜಿಲ್ಲೆಯ ಜಂಟಿ/ಉಪನಿದೇಶಕರು (ಸಕ್ಷಮ ಪ್ರಾಧಿಕಾರಿ) ಇವರಿಗೆ ನಿರ್ಧಾರವನ್ನುಕೈಗೊಳ್ಳುವ ಅವಕಾಶವನ್ನು ನೀಡಲಾಗಿದೆ. ಅದಲ್ಲದೇ ಒಂದು ದೇಶ ಒಂದು ಪಡಿತರ ವ್ಯವಸ್ಥೆ ಅಡಿಯಲ್ಲಿ ಯಾವುದೇ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಪಡೆಯಲು ಅವಕಾಶ ಕಲ್ಪಿಸಲಾಗಿದೆ. |
| ಈ | ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಪಡಿತರ ವಿತರಣೆಯಲ್ಲಿ ಮಹತ್ತರ ಬದಲಾವಣೆ ತರುವ ಕುರಿತು ರೂಪಿಸಿರುವ ಕಾರ್ಯಕ್ರಮಗಳಾವುವು? | ಗ್ರಾಮಾಂತರ ಪ್ರದೇಶ ಸೇರಿದಂತೆ ರಾಜ್ಯದ ಸಾರ್ವಜನಿಕ ವಿತರಣಾ ಪದ್ಧತಿಯಡಿ ವಿತರಿಸುತ್ತಿರುವ ಪಡಿತರ ಪದಾರ್ಥಗಳು ಸಂಪೂರ್ಣವಾಗಿ ಫಲಾನುಭವಿಗಳಿಗೆ ತಲುಪಲು ವ್ಯವಸ್ಥೆಯಲ್ಲಿ ಈ ಕೆಳಕಂಡಂತೆ ಹಲವಾರು ಸುಧಾರಣೆಗಳನ್ನು ಜಾರಿಗೆ ತರಲಾಗಿದೆ. |

| | | |
|---|---|---|
| | | 1. ರಾಜ್ಯದ ಎಲ್ಲಾ ಪಡಿತರ ಚೀಟಿಗಳು ಮತ್ತು ಫಲಾನುಭವಿಗಳನ್ನು ಅವರ ಆಧಾರ್‌ನೊಂದಿಗೆ ಜೋಡಣೆ ಮಾಡಿದ್ದು, ಪ್ರತಿ ಮಾಹೆ ಪಡಿತರ ಪದಾರ್ಥಗಳನ್ನು ನೇರವಾಗಿ ಫಲಾನುಭವಿಗಳಿಗೆ ತಲುಪಿಸಲು ಬಯೋಮೆಟ್ರಿಕ್ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ.<br>2. ನ್ಯಾಯಬೆಲೆ ಅಂಗಡಿಗಳಲ್ಲಿ ಪಿ.ಓ.ಎಸ್ ವ್ಯವಸ್ಥೆ ಜಾರಿಗೊಳಿಸಿದ್ದು, ನೈಜ ಫಲಾನುಭವಿಗೆ ನೇರವಾಗಿ ಪಡಿತರ ವಿತರಣೆಯಾಗುವುದನ್ನು ದಾಖಲಿಸಲಾಗುತ್ತಿದೆ. ಹಾಗೂ ಹಂಚಿಕೆ ಬಗ್ಗೆ ಪಡಿತರ ಚೀಟಿದಾರರಿಗೆ ಎಸ್.ಎಂ.ಎಸ್. ರವಾನೆ ವ್ಯವಸ್ಥೆ ಜಾರಿಯಲ್ಲಿದೆ.<br>3. ಪಡಿತರ ಪದಾರ್ಥಗಳನ್ನು ಸಗಟು ಮಳಿಗೆಗಳಲ್ಲಿ ದಾಸ್ತಾನಿರಿಸುವುದು ಹಾಗೂ ನ್ಯಾಯಬೆಲೆ ಅಂಗಡಿಗಳಿಗೆ ಬಿಲ್ಲಿಂಗ್ ಮಾಡುವ ವ್ಯವಸ್ಥೆಯನ್ನು ಗಣಕೀಕರಣಗೊಳಿಸಿ ಆನ್‌ಲೈನ್ ವ್ಯವಸ್ಥೆ ಜಾರಿಯಲ್ಲಿದೆ. ಪ್ರತಿ ತಿಂಗಳು ಉಳಿಕೆಯಾಗುವ ಪದಾರ್ಥವನ್ನು ಲೆಕ್ಕಕ್ಕೆ ತೆಗೆದುಕೊಂಡು ಮುಂದಿನ ಮಾಹೆಗೆ ನ್ಯಾಯಬೆಲೆ ಅಂಗಡಿಗೆ ಪಡಿತರವನ್ನು ಹಂಚಿಕೆ ಮಾಡುವಾಗ ಆರಂಭಿಕ ದಾಸ್ತಾನಾಗಿ ಕಡಿತಗೊಳಿಸಲಾಗುತ್ತದೆ.<br>4. ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ 2013 ರ ಪ್ರಕಾರ ಯಾವುದೇ ಪಡಿತರ ಚೀಟಿದಾರನಿಗೆ ಪಡಿತರವನ್ನು ನೀಡಲು ನಿರಾಕರಿಸದಂತೆ ಹಾಗೂ ಪಡಿತರ ವ್ಯವಸ್ಥೆಯಲ್ಲಿ ಪಾರದರ್ಶಕತೆಯನ್ನು ಜಾರಿಗೆ ತರುವುದರೊಂದಿಗೆ ಫಲಾನುಭವಿಗಳ ಕುಂದುಕೊರತೆ ನಿವಾರಣಾ ವ್ಯವಸ್ಥೆಯನ್ನು ಕೂಡ ಜಾರಿಗೆ ತರಲು ಆಹಾರ ಅದಾಲತ್, ಜಾಗೃತ ಸಮಿತಿಗಳು, ಸಹಾಯವಾಣಿ ಇತ್ಯಾದಿ ಕ್ರಮಗಳೂ ಕೂಡ ಜಾರಿಯಲ್ಲಿವೆ.<br>5. ಅಂತರ್ ರಾಜ್ಯ/ಜಿಲ್ಲಾ ವರ್ಗಾವಣೆ (Inter-State/Intra-State Portability) ವ್ಯವಸ್ಥೆ ಅಡಿಯಲ್ಲಿ ಯಾವುದೇ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರ ಪಡೆಯಲು ಅವಕಾಶ ಕಲ್ಪಿಸಲಾಗಿದೆ. |

ಆನಾಸ 50 ಆನಾಸ 2020 (ಇ-ಆಫೀಸ್)

(ಕೆ.ಗೋಪಾಲಯ್ಯ)

ಆಹಾರ, ನಾಗರಿಕ ಸರಬರಾಜು ಮತ್ತು

ಗ್ರಾಹಕರ ವ್ಯವಹಾರಗಳ ಹಾಗೂ

ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು.